Government of Karnataka

<u>Deposition Sheet Form No. R.P. 57</u>

ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಲಿಂಗಸುಗೂರು.

ಸಿ.ಸಿ.ನಂ. 714/2023

ಸಿ.ಡಬ್ಲೂ-05

ಪಿ.ಡಬ್ಲೂ-03

| | | |
|---|---|---|
| ಸಾಕ್ಷಿದಾರರ ಹೆಸರು | :- | ರವಿ |
| ತಂದೆಯ ಹೆಸರು | :- | ತಿಪ್ಪಣ್ಣ |
| ವಯಸ್ಸು | :- | 22 ವರ್ಷ |
| ಉದ್ಯೋಗ | :- | ಒಕ್ಕಲುತನ |
| ವಾಸಸ್ಥಳ | :- | ಹಾಲಭಾವಿ ತಾಂಡ |

ದಿನಾಂಕ 06-08-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.

**<u>ಮುಖ್ಯ ವಿಚಾರಣೆ : ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ:-</u>**

ಚಾ.ಸಾ-1 ನನ್ನ ಅಕ್ಕ. ಚಾ.ಸಾ-2 ಮತ್ತು 3 ನಮ್ಮೂರಿನವರು ಪರಿಚಯ ಇದೆ. ಚಾ.ಸಾ-4 ನನ್ನ ಅಣ್ಣ. ಚಾ.ಸಾ-6 ನನ್ನ ಅಕ್ಕನ ಮಗಳು. ಚಾ.ಸಾ-7 ನನ್ನ ತಂದೆ. ಚಾ.ಸಾ-8 ನನ್ನ ತಾಯಿ. 1ನೇ ಆರೋಪಿ ನನ್ನ ಮಾವ. 2ನೇ ಆರೋಪಿ ಮೃತಪಟ್ಟಿರುತ್ತಾನೆ. 3ನೇ ಆರೋಪಿ ನನ್ನ ಮಾವ. 4 ರಿಂದ 11 ನೇ ಆರೋಪಿತರು ನಮ್ಮ ಸಂಬಂಧಿಕರು.

ದಿನಾಂಕ 11-06-2023 ರಂದು ಬೆಳಿಗ್ಗೆ 8-00 ಗಂಟೆಗೆ ಚಾ.ಸಾ-1 ರವರು ತಮ್ಮಮನೆಯ ಮುಂದೆ ಇರುವಾಗ ಚಾ.ಸಾ-1 ರವರು ತನ್ನ ಗಂಡನಿಗೆ ಬರಬೇಕಾದ ಆಸ್ತಿಯನ್ನು ಕೊಡಬೇಕು ಎಂದು ಹಿರಿಯರಿಗೆ ಕರೆಯಬೇಕು ಎಂದು ಅವರ ಮನೆಯ ಮುಂದೆ ಇದ್ದಾಗ ಎಲ್ಲಾ ಆರೋಪಿತರು ಗುಂಪು ಕಟ್ಟಿಕೊಂಡು ಬಂದು ಚಾ.ಸಾ-1 ರವರಿಗೆ ಬೋಸೂಡಿ, ಸೂಳೆ ಎಂದು ಅವಾಚ್ಯವಾಗಿ ಬೈದಿರುತ್ತಾರೆ. ನಂತರ ಚಾ.ಸಾ-1 ರವರಿಗೆ ಲೇ ನಿನಗೆ ಬಾಗ ಕೊಡುವದಿಲ್ಲ ಎಲ್ಲಿಗೆ ಹೋಗುತ್ತಿಯಾ ಹೋಗು ಎಂದು 1ನೇ ಆರೋಪಿ ಬೈದು ಕಬ್ಬಿಣದ ರಾಡಿನಿಂದ ಹೊಡೆದಿರುತ್ತಾನೆ. ನಂತರ 1ನೇ ಆರೋಫಿ ಚಾ.ಸಾ-1 ರವರ ಸೀರೆ ಹಿಡಿದು ಎಳೆದಾಡಿ ಮಾನಬಂಗ ಮಾಡಿರುತ್ತಾನೆ.

ನಂತರ 3, 5, 6 ಮತ್ತು 11ನೇ ಆರೋಪಿರು ಬಂದು ಚಾಸಾ-1 ರವರಿಗೆ ಕೈಗಳಿಂದ ಹೊಡೆದಿರುತ್ತಾರೆ. ಆಗ ನಾನು ಮತ್ತು ಚಾ.ಸಾ-4 ರವರು ಜಗಳ ಬಿಡಿಸಲು ಹೋದಾಗ 1ನೇ ಆರೋಪಿ ನನಗೆ ಕೈ ಮುಷ್ಟಿ ಮಾಡಿ ಎದೆಯ ಬಾಗಕ್ಕೆ ಹೊಡೆದಿರುತ್ತಾನೆ. ಅದೇ ರೀತಿ ಚಾ.ಸಾ-4 ರವರಿಗೆ 1ನೇ ಆರೋಪಿ ಕಟ್ಟಿಗೆಯಿಂದ ಹೊಡೆದಿರುತ್ತಾನೆ. ಚಾ.ಸಾ-6 ರವರು ಜಗಳ ಬಿಡಿಸಿರುತ್ತಾರೆ. ನಂತರ ಚಾ.ಸಾ-6 ರವರಿಗೆ ಎಲ್ಲಾ ಆರೋಪಿತರು ಕೈಯಿಂದ ಹೊಡೆದಿರುತ್ತಾರೆ. ಚಾ.ಸಾ-7 ಮತ್ತು 8 ರವರು ಬಂದು ಜಗಳ ಬಿಡಿಸಿರುತ್ತಾರೆ. ಕಟ್ಟಿಗೆ ಮತ್ತು ಕಬ್ಬಿಣದ ರಾಡನ್ನು ನೋಡಿ ಗುರುತಿಸಿದ್ದು ಅವುಗಳನ್ನು ಈಗಾಗಲೇ ಮುದ್ದೇಮಾಲು-1 ಮತ್ತು 2 ಎಂದು ಗುರುತಿಸಲಾಗಿದೆ.

**ಪಾಟೀ ಸವಾಲು ಶ್ರೀ ಎಸ್.ಆರ್.ಆರ್ ವಕೀಲರಿಂದ : -**

ಚಾ.ಸಾ-1 ನನ್ನ ಅಕ್ಕ. ನಮ್ಮ ಅಕ್ಕನ ಗಂಡ 1ನೆ ಆರೋಪಿಯ ತಮ್ಮನಾಗಿದ್ದು ಆತನು ಮದುವೆಯಾಗುವದಕ್ಕಿಂತ ಮುಂಚೆ ಬೇರೆಯಾಗಿದ್ದ ಎಂದರೆ ನನಗೆ ಗೊತ್ತಿಲ್ಲ. ನಮ್ಮ ಅಕ್ಕನ ಗಂಡ ಹೊಲದಲ್ಲಿ ಭಾಗ ತೆಗೆದುಕೊಂಡಿದ್ದ ಎಂದರೆ ಸರಿಯಲ್ಲ. 1ನೇ ಆರೋಪಿತನು ಅವರು ಬೇರೆಯಾದ ನಂತರ 4 ಎಕರೆ ಜಮೀನನ್ನು ತನ್ನ ತಾಯಿಯ ಹೆಸರಿನಲ್ಲಿ ಖರೀದಿ ಮಾಡಿದ್ದ ಎಂದರೆ ನನಗೆ ಗೊತ್ತಿಲ್ಲ. ಚಾ.ಸಾ-1 ರವರು ಜಮೀನಿನಲ್ಲಿ ಬಾಗ ಬೇಕು ಎಂದು ಹಿರಿಯ ಶ್ರೇಣಿ ನ್ಯಾಯಾಲಯದಲ್ಲಿ ಕೇಸು ಹಾಕಿರುತ್ತಾಳೆ ಎಂದರೆ ಸರಿ. ಆ ಆಸ್ತಿಯಲ್ಲಿ ನಮ್ಮ ಅಕ್ಕನಿಗೆ ಯಾವುದೇ ಬರದಿದ್ದರೂ ಸಹ ಆರೋಪಿತರ ಜೊತೆ ಜಗಳ ಮಾಡಿರುತ್ತಾಳೆ ಎಂದರೆ ಸರಿಯಲ್ಲ. ಈಗಾಗಲೇ ನಮ್ಮ ಅಕ್ಕನಿಗೆ 2 ಎಕರೆ ಜಮೀನು ಕೊಟ್ಟಿದ್ದು ಅದನ್ನು ಉಳುಮೆ ಮಾಡುತ್ತಿದ್ದಾಳೆ ಎಂದರೆ ಸರಿಯಲ್ಲ. ಆ ದ್ವೇಷದಿಂದ ಚಾ.ಸಾ-1 ರವರು ಆರೋಪಿತರ ವಿರುದ್ದ ಸುಳ್ಳು ಕೇಸು ದಾಖಲಿಸಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿತರು ನನಗೆ, ಚಾ.ಸಾ-1 ಮತ್ತು 4 ರವರಿಗೆ ಹೊಡೆಬಡೆ ಮಾಡಿರುತ್ತಾರೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಪೋಲಿಸರ ಮುಂದೆ ಹೇಳಿಕೆಯಲ್ಲಿ ಈ ವಿಷಯಗಳನ್ನು ಹೇಳಿರುತ್ತೇನೆ. ಆರೋಪಿತರು ಯಾವುದೇ ಕಟ್ಟಿಗೆಯಿಂದ, ಕಬ್ಬಿಣದ ರಾಡಿನಿಂದ ಹಲ್ಲೆ ಮಾಡಿಲ್ಲ ಅವಾಚ್ಯವಾಗಿ ಬೈದಿಲ್ಲ ಜೀವ ಬೆದರಿಕೆ ಹಾಕಿಲ್ಲ ಎಂದರೆ ಸರಿಯಲ್ಲ. 1ನೇ ಆರೋಪಿ ಚಾ.ಸಾ-1 ರವರ ಸೀರೆ ಹಿಡಿದು ಎಳೆದಾಡಿ ಮಾನಬಂಗ ಮಾಡಿಲ್ಲ ಎಂದೆರ ಸರಿಯಲ್ಲ. ಚಾ.ಸಾ-6 ರವರಿಗೆ ಯಾವುದೇ ಹಲ್ಲೆ ಮಾಡಿಲ್ಲ

ಎಂದರೆ ಸರಿಯಲ್ಲ.  ಚಾ.ಸಾ-1 ರವರು ನಮ್ಮ ಅಕ್ಕ ಆಗಿದ್ದರಿಂದ ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಿಸಲಾಯಿತು)

ಓ. ಹೇ. ಕೇ. ಸರಿ ಇದೆ.

ಸಹಿ/-

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ.,

ಲಿಂಗಸಗೂರು.